ಲೋಕಾಯುಕ್ತಕ್ಕೆ ಹೆಚ್ಚು ಅಧಿಕಾರ ನೀಡುವುದು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 2(305)

ಸದಸ್ಯರ ಹೆಸರು ಶ್ರೀ ಮಲ್ಲಿಕಾರ್ಜುನ.ಕೆ ಬಿ(ಬೀರೂರು)

ಉತ್ತರಿಸುವ ಸಚಿವರು ಶ್ರೀ ಎಸ್ ಎಂ ಕೃಷ್ಣ(ಮುಖ್ಯ ಮಂತ್ರಿಗಳು)

ಪ್ರಶ್ನೆ

ಅ) ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ ಜನ ಪ್ರತಿನಿಧಿಗಳ ಮತ್ತು ಅಧಿಕಾರಿಗಳ ಮೇಲೆ ಸ್ವಪ್ರೇರಣೆಯಿಂದ ನೇರ ವಿಚಾರಣೆ ನಡೆಸಲು ಲೋಕಾಯುಕ್ತಕ್ಕೆ ಅಧಿಕಾರ ನೀಡಲಾಗುವುದೇ?

ಆ) ಹಾಗಿದ್ದಲ್ಲಿ ಯಾವಾಗ ಅಧಿಕಾರ ನೀಡಲಾಗುವುದು?

ಉತ್ತರ

ಅ ಮತ್ತು ಆ) ಇದರ ಬಗ್ಗೆ ಸಾರ್ವಜನಿಕ ಚರ್ಚೆ ಪ್ರಾರಂಭವಾಗಿದೆ

ರಾಜ್ಯದಲ್ಲಿ ವಾರದಲ್ಲಿ 5 ದಿನಗಳ ಕಾಲ ಕೆಲಸ ಮಾಡುವ ಯೋಜನೆ ಪುನಃ ಜಾರಿಗೊಳಿಸುವುದು

ಚುಕ್ಕೆ ಗುರುತಿಲ್ಲದ ಪ್ರಶ್ನ ಸಂಖ್ಯೆ 3(340)

ಸದಸ್ಯರ ಹೆಸರು: ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ

ಉತ್ತರಿಸುವ ಸಚಿವರು ಶ್ರೀ ಎಸ್ ಎಂ ಕೃಷ್ಣ (ಮುಖ್ಯ ಮಂತ್ರಿಗಳು)

ಪ್ರಶ್ನೆ

ಅ ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಯೋಜನೇತರ ವೆಚ್ಚದಿಂದ ಆಗುತ್ತಿರುವ ಹೊರೆಯನ್ನು ತಗ್ಗಿಸಲು ಸರ್ಕಾರಿ ನೌಕರರ ಕೆಲಸದ ಅವಧಿ ಹೆಚ್ಚಿಸಿ ವಾರದಲ್ಲಿ 5 ದಿನಗಳ ಕಾಲ ಕೆಲಸ ಮಾಡುವ ವ್ಯವಸ್ಥೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ 5 ದಿನಗಳ ಕಾಲ ಸರ್ಕಾರಿ ನೌಕರರು ಕೆಲಸ ಮಾಡಿದಲ್ಲಿ ಸರ್ಕಾರದ ಬೊಕ್ಕಸಕ್ಕೆ

ಎಷ್ಟು ಹಣ ಉಳಿತಾಯವಾಗುವುದು?

ಇ. ರಾಜ್ಯದಲ್ಲಿ 5 ದಿನಗಳ ಕಾಲ ಕೆಲಸ ಮಾಡುವ ಯೋಜನೆಯನ್ನು ಜಾರಿಗೆ ತಂದಲ್ಲಿ ಯಾವ ಯಾವ ಇಲಾಖೆಗಳಿಗೆ ಅನ್ವಯವಾಗುವುದು ಹಾಗೂ ಇದರಿಂದ ಸರ್ಕಾರಕ್ಕೆ ಮತ್ತು ಸಾರ್ವಜನಿಕರಿಗೆ ಆಗುವ ಪ್ರಯೋಜನವೇನು?

ಉತ್ತರ

ಅ ಇಲ್ಲ

ಆ ಉದ್ಭವಿಸುವುದಿಲ್ಲ

ಇ. ಉದ್ಭವಿಸುವುದಿಲ್ಲ

ಗ್ರಾಮೀಣ ಕೃಪಾಂಕದಡಿಯಲ್ಲಿ ನೇಮಕಗೊಂಡಿರುವ ನೌಕರರ ಕುರಿತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 6(420)

ಸದಸ್ಯರ ಹೆಸರು ಶ್ರೀ ಸಿಂಧ್ಯ ಪಿ ಜಿ ಆರ್ (ಕನಕಪುರ)

ಉತ್ತರಿಸುವ ಸಚಿವರು ಶ್ರೀ ಎಸ್ ಎಂ ಕೃಷ್ಣ(ಮುಖ್ಯಮಂತ್ರಿಗಳು)

ಪ್ರಶ್ನೆ

ಅ) ಗ್ರಾಮೀಣ ಕೃಪಾಂಕದಡಿಯಲ್ಲಿ ನೇಮಕಗೊಂಡಿರುವ ಸರ್ಕಾರಿ ನೌಕರರ ನೇಮಕಾತಿಯನ್ನು ಸರ್ವೋಚ್ಚ ನ್ಯಾಯಾಲಯವು ಅಸಿಂಧುಗೊಳಿಸಿದೆಯೇ?

ಆ) ಹಾಗಿದ್ದಲ್ಲಿ, ಸರ್ವೋಚ್ಚ ನ್ಯಾಯಾಲಯದ ಆದೇಶದ ಪ್ರಕಾರ ರಾಜ್ಯದಲ್ಲಿ ಗ್ರಾಮೀಣ ಕೃಪಾಂಕದಡಿ ನೇಮಕಾತಿ ಪಡೆದು ವಿವಿಧ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು (ಇಲಾಖಾವಾರು ವಿವರಗಳನ್ನು ನೀಡುವುದು)

ಇ) ಈ ಎಲ್ಲಾ ನೌಕರರನ್ನು ಬೇರೆ ಯಾವುದಾದರೂ ರೂಪದಲ್ಲಿ ಖಾಯಂಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಈ) ಸರ್ವೋಚ್ಚ ನ್ಯಾಯಾಲಯದ ತೀರ್ಪನ್ನು ಪುನರ್ ಪರಿಶೀಲಿಸಲು ರಾಜ್ಯ